ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

23

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:    ದಿನಾಂಕ : DATE : 29/7/2020

# ಸಂಸದ ಜಾಧವ್‌ಗೆ ಎದೆನೋವು, ಬೆಂಗ್ಳೂರಿನ ಜಯದೇವಗೆ ದಾಖಲು

## ಇತ್ತೀಚೆಗಷ್ಟೇ ಕೊರೋನಾ ವಿರುದ್ಧ ಗೆದ್ದಿದ್ದರು

ಕಲಬುರಗಿ: ಕೊರೋನಾದಿಂದ ಇತ್ತೀಚೆಗಷ್ಟೇ ಗುಣಮುಖರಾಗಿ ಬಂದಿದ್ದ ಕಲಬುರಗಿ ಬಿಜೆಪಿ ಸಂಸದ ಡಾ.ಉಮೇಶ ಜಾಧವ್ ಎದೆ ನೋವು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಸೋಮವಾರ ಬೆಂಗಳೂರಿನ ಜಯದೇವ ಆಸ್ಪತ್ರೆಗೆ ದಾಖಲಾಗಿದ್ದಾರೆ. ಸಣ್ಣಪ್ರಮಾಣದ ಎದೆನೋವು ಕಾಣಿಸಿಕೊಂಡಿದೆ. ಆರೋಗ್ಯದಲ್ಲಿ ಏರುಪೇರು ಆಗಿರುವ ಕಾರಣ ಬೆಂಗಳೂರಿನ ಜಯದೇವ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಾಗಿದ್ದೇನೆ. ಜಯದೇವ ಆಸ್ಪತ್ರೆಯ ಮುಖ್ಯಸ್ಥ ಡಾ. ಮಂಜುನಾಥ್ ನಿರ್ದೇಶನದಂತೆ ಚಿಕಿತ್ಸೆ ಸಾಗಿದೆ. ಪ್ರಾಥಮಿಕ ಉಪಚಾರ ಮಾಡಿದ್ದಾರೆ. ಅವರ ಸಲಹೆಯಂತೆಯೇ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿರುವೆ. ಶೀಘ್ರವೇ ಗುಣಮುಖನಾಗಿ ಹಿಂದಿರುಗಲಿದ್ದೇನೆ. ಅಭಿಮಾನಿಗಳು, ಪಕ್ಷದ ಕಾರ್ಯಕರ್ತರು ಆತಂಕಪಡಬಾರದು ಎಂದು ಡಾ.ಜಾಧವ್ ಇದೇ ವೇಳೆ ಜಾಧವ್ ಟ್ವೀಟ್ ಮಾಡಿ ತಿಳಿಸಿದ್ದಾರೆ.

